ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

23

ಇಲಾಖೆ / ವಿಷಯ : DEPARTMENT / SUBJECT: ಇತರೆ ರಾಜ್ಯಗಳ ಮಾಹಿತಿ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE : 24/7/2020

# ರಾಜಸ್ಥಾನದ ಬಂಡಾಯ ಶಾಸಕರಿಗೆ ಸುಪ್ರೀಂ ರಿಲೀಫ್

■ **ವಿಕ ಸುದ್ದಿಲೋಕ** ಹೊಸದಿಲ್ಲಿ

ಶಾಸಕರ ಅನರ್ಹತೆ ನೋಟಿಸ್‌ನ ಸಾಂವಿಧಾನಿಕ ಮಾನ್ಯತೆ ಪ್ರಶ್ನಿಸಿ ರಾಜಸ್ಥಾನದ ಮಾಜಿ ಉಪ ಮುಖ್ಯಮಂತ್ರಿ ಸಚಿನ್ ಪೈಲಟ್ ಮತ್ತು ಅವರ ಬೆಂಬಲಿಗ ಶಾಸಕರು ಸಲ್ಲಿಸಿದ್ದ ಅರ್ಜಿ ಕುರಿತ ತೀರ್ಪು ಪ್ರಕಟಿಸಲು ಸುಪ್ರೀಂ ಕೋರ್ಟ್ ಗುರುವಾರ ರಾಜಸ್ಥಾನ ಹೈಕೋರ್ಟ್‌ಗೆ ಅನುಮತಿ ನೀಡುವುದರೊಂದಿಗೆ ಕಾನೂನು ಹೋರಾಟದಲ್ಲಿ



ಗಹ್ಲೋಟ್-ಪೈಲಟ್ ಫೈಟ್

ಪೈಲಟ್ ಬಣ 'ಮಿನಿ ವಿಜಯ' ಸಾಧಿಸಿದೆ.

ಅನರ್ಹತೆ ಪ್ರಕರಣದಲ್ಲಿ ನ್ಯಾಯಾಲಯವು ಸ್ಪೀಕರ್ ಅಧಿಕಾರ ವ್ಯಾಪ್ತಿಯನ್ನು ಪ್ರವೇಶಿಸುವಂತಿಲ್ಲ ಎಂದು ವಾದಿಸಿ ರಾಜಸ್ಥಾನ ಸ್ಪೀಕರ್ ಸಿ.ಪಿ.ಜೋಶಿ ಸಲ್ಲಿಸಿದ್ದ ಮೇಲ್ಮನವಿ ವಿಚಾರಣೆಯನ್ನು ಸುಪ್ರೀಂ ಕೋರ್ಟ್ ತ್ರಿಸದಸ್ಯ ಪೀಠ ಗುರುವಾರ ನಡೆಸಿತು. ತಮ್ಮ ವಾದವನ್ನೂ ಆಲಿಸಬೇಕೆಂದು ಕೇವಿಯೆಟ್ ಸಲ್ಲಿಸಿದ್ದ ಸಚಿನ್ ಪೈಲಟ್ ಹಾಗೂ ಅವರ ಬೆಂಬಲಿಗ 18 ಶಾಸಕರ ವಾದವನ್ನೂ ಪೀಠ ಆಲಿಸಿತು. ಬಳಿಕ, ''ವಿಚಾರಣೆ ಪೂರ್ಣಗೊಳಿಸಿರುವ ರಾಜಸ್ಥಾನ ಹೈಕೋರ್ಟ್ ತೀರ್ಪು ಪ್ರಕಟಿಸಬಹುದು. ಆದರೆ ಈ ತೀರ್ಪು ಸ್ಪೀಕರ್ ಅರ್ಜಿ ಸಂಬಂಧ ಸುಪ್ರೀಂ ಕೋರ್ಟ್ ನೀಡುವ ಅಂತಿಮ ತೀರ್ಪಿಗೆ ಒಳಪಟ್ಟಿರುತ್ತದೆ,'' ಎಂದು ಷರತ್ತು ವಿಧಿಸಿತು. ನ್ಯಾಯಮೂರ್ತಿ ಅರುಣ್ ಮಿಶ್ರಾ, ಬಿ.ಆರ್.ಗವಾಯಿ, ಕೃಷ್ಣ ಮುರಾರಿ ಅವರನ್ನೊಳಗೊಂಡ ಪೀಠವು ವಿಚಾರಣೆಯನ್ನು ಜುಲೈ 27ಕ್ಕೆ ಮುಂದೂಡಿತು. ರಾಜಸ್ಥಾನ ಹೈಕೋರ್ಟ್ ಶುಕ್ರವಾರ ತೀರ್ಪು ಪ್ರಕಟಿಸುವ ಸಾಧ್ಯತೆ ಇದೆ.

ರಾಜಸ್ಥಾನ್ ಸ್ಪೀಕರ್ ಪರ ಹಾಜರಾದ ಹಿರಿಯ ವಕೀಲ ಕಪಿಲ್ ಸಿಬಲ್ ಅವರು, ''ಸ್ಪೀಕರ್‌ಗೆ ಕೋರ್ಟ್ ನಿರ್ದೇಶನ ನೀಡಲು ಸಾಧ್ಯವಿಲ್ಲ, ಇದು ನ್ಯಾಯಾಂಗದ ವ್ಯಾಪ್ತಿಗೆ ಬರುವುದಿಲ್ಲ'' ಎಂದು ವಾದಿಸಿದರು. ಬಂಡಾಯ ಕಾಂಗ್ರೆಸ್ ಶಾಸಕರ ವಿರುದ್ಧ ಅನರ್ಹತೆ ಕ್ರಮ ಜರುಗಿಸಲು ಕಾರಣವೇನು ಎಂದು ಸುಪ್ರೀಂ ಕೋರ್ಟ್ ಸಿಬಲ್ ಅವರನ್ನು ಪ್ರಶ್ನಿಸಿತು. ಬಂಡಾಯ ಶಾಸಕರು ಶಾಸಕಾಂಗ ಸಭೆಗಳಿಗೆ ಹಾಜರಾಗಿಲ್ಲ ಮತ್ತು ತಮ್ಮದೇ ಪಕ್ಷದ ಸರಕಾರವನ್ನು ಅಸ್ಥಿರಗೊಳಿಸಲು ಸಂಚು ಹೂಡಿದ್ದಾರೆ ಎಂಬ ಕಾರಣಗಳನ್ನು ಸಿಬಲ್ ನೀಡಿದರು. 1992ರ ಕಿಹೋಟೋ ಹೊಲೊಹನ್ ಪ್ರಕರಣದಲ್ಲಿ ಸುಪ್ರೀಂಕೋರ್ಟ್ ನೀಡಿದ ತೀರ್ಪನ್ನು ಉಲ್ಲೇಖಿಸಿದ ಸಿಬಲ್, ಸಂವಿಧಾನದ 10ನೇ ಶೆಡ್ಯೂಲ್ ಅಡಿಯಲ್ಲಿ ಸ್ಪೀಕರ್ ಕೈಗೊಂಡ ಅನರ್ಹತೆ ಕ್ರಮಗಳಲ್ಲಿ ಕೋರ್ಟ್ ಮಧ್ಯಪ್ರವೇಶಿಸಲು ಸಾಧ್ಯವಿಲ್ಲ ಎಂದರು.

## ಕೋರ್ಟ್ ಹೇಳಿದ್ದೇನು?

1. ಸ್ಪೀಕರ್ ಎತ್ತಿರುವುದು ಸರಳ ವಿಷಯವಲ್ಲ, ಈ ಬಗ್ಗೆ ಸುದೀರ್ಘ ವಿಚಾರಣೆ ನಡೆಯುವ ಅಗತ್ಯವಿದೆ.
2. ಶಾಸಕರು ಚುನಾಯಿತ ಪ್ರತಿನಿಧಿಗಳು. ಪ್ರಜಾಪ್ರಭುತ್ವದಲ್ಲಿ ಭಿನ್ನಾಭಿಪ್ರಾಯದ ಧ್ವನಿಯನ್ನು ಹತ್ತಿಕ್ಕಲು ಸಾಧ್ಯವಿಲ್ಲ.
3. ಶಾಸಕರನ್ನು ಸ್ಪೀಕರ್ ಅಮಾನತುಗೊಳಿಸಿದರೆ ಅಥವಾ ಅನರ್ಹಗೊಳಿಸಿದರೆ ನ್ಯಾಯಾಲಯಗಳು ಮಧ್ಯಪ್ರವೇಶಿಸಲು ಸಾಧ್ಯವಿಲ್ಲವೇ?
4. ಸದ್ಯದ ಸ್ಥಿತಿಯಲ್ಲಿ ಹೈಕೋರ್ಟ್ ಸಲ್ಲಿರುವ ಅರ್ಜಿಯನ್ನು ಸುಪ್ರೀಂ ಕೋರ್ಟ್‌ಗೆ ವರ್ಗಾಯಿಸಲು ಸಾಧ್ಯವಿಲ್ಲ.
5. ಅನರ್ಹತೆಯ ಪ್ರಕ್ರಿಯೆಯನ್ನು ಅನುಮತಿಸಲಾಗಿದೆಯೇ ಅಥವಾ ಇಲ್ಲವೇ ಎಂಬುದನ್ನು ಕಂಡುಹಿಡಿಯಲು ಕೋರ್ಟ್ ಪ್ರಯತ್ನಿಸುತ್ತಿದೆ.